**ಸಾಕ್ಷಿಗೆ ದಿನಾಂಕ 15.05.2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

ಮುಖ್ಯ ವಿಚಾರಣೆ: ಅರ್ಜಿದಾರರ ಪರ ಶ್ರೀ ಪಿ.ಆರ್ ವಕೀಲರಿಂದಃ

1. ನಾನು ಈ ಪ್ರಕರಣದಲ್ಲಿ, ಅರ್ಜಿದಾರನಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಸಂಬಂಧಿಸಿದಂತೆ, ನಾನು ಈ ದಿನ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಅದರಲ್ಲಿರುವ ಅಂಶಗಳು ಸತ್ಯವಾಗಿರುತ್ತವೆ. ಅದನ್ನು ನಾನು ಓದಿ ತಿಳಿದುಕೊಂಡು ಸಹಿಮಾಡಿರುತ್ತೇನೆ.

2. ನಾನು ಈ ಪ್ರಕರಣದಲ್ಲಿ ತೆಗೆದುಕೊಂಡಿರುವ ನಿಲುವಿಗೆ ಸಂಬಂಧಿಸಿದಂತೆ ಈ ಕೆಳಕಂಡ ದಾಖಲೆಗಳನ್ನು ಹಾಜರು ಮಾಡುತ್ತಿದ್ದೇನೆ. ಸಾಕ್ಷಿಹಾಜರು ಮಾಡಿದ ದಾಖಲಾತಿಗಳನ್ನು ಈ ಕೆಳಕಂಡಂತೆ ನಿಶಾನಿಕರಿಸಲಾಗಿರುತ್ತದೆ.:

| | |
|---|---|
| ನಿ.ಪಿ 1 | ಪ್ರಥಮ ವರ್ತಮಾನ ವರದಿಯ ದೃಢೀಕೃತ ಪ್ರತಿ |
| ನಿ.ಪಿ 2 | ಪ್ರಥಮ ಹೇಳಿಕೆಯ ದೃಢೀಕೃತ ಪ್ರತಿ |
| ನಿ.ಪಿ 3 | ಸ್ಥಳ ಪಂಚನಾಮೆಯ ದೃಡೀಕೃತ ಪ್ರತಿ |
| ನಿ.ಪಿ 4 | ಕಚ್ಚಾ ನಕಾಶೆಯ ದೃಡೀಕೃತ ಪ್ರತಿ |
| ನಿ.ಪಿ 5 | ಕಲಂ 133 ರಡಿ ನೀಡಿದ ನೋಟೀಸ್ ನ ದೃಢೀಕೃತ ಪ್ರತಿ |
| ನಿ.ಪಿ 6 | ಕಲಂ 133 ರಡಿ ನೀಡಿದ ನೋಟೀಸಿಗೆ ಉತ್ತರ ದೃಢೀಕೃತ ಪ್ರತಿ |
| ನಿ.ಪಿ 7 | ಐ ಎಂ ವಿ ವರದಿಯ ದೃಢೀಕೃತ ಪ್ರತಿ |
| ನಿ.ಪಿ 8 | ಗಾಯಾದ ಪ್ರಮಾಣ ಪತ್ರದ ದೃಢೀಕೃತ ಪ್ರತಿ |
| ನಿ.ಪಿ 9 | ದೋಷರೋಪಣಾ ಪಟ್ಟಿಯ ದೃಡೀಕೃತ ಪ್ರತಿ |

**ಮುಂದುವರೆದ ಮುಖ್ಯ ವಿಚಾರಣೆಗೆ ಕಾಲಾವಕಾಶ ಕೋರಿದ್ದು, ಮುಂದೂಡಲಾಯಿತು.**

**(ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ.)**

**(ಓ. ಹೇ. ಕೇ. ಸ.ಇ)**

**3ನೇ ಹೆಚ್ಚುವರಿ ಲಘು ವ್ಯವಹಾರಗಳ**
**ನ್ಯಾಯಾಧೀಶರು, ಬೆಂಗಳೂರು.**